ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಪಿಲಿಕುಳ ನಿಸರ್ಗಧಾಮದಲ್ಲಿ ಪ್ಲ್ಯಾನಿಟೋರಿಯಂ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

1446 (1739) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪಿಲಿಕುಳ ನಿಸರ್ಗಧಾಮದಲ್ಲಿ ಪ್ಲ್ಯಾನಿಟೋರಿಯಂಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ; ಈ ಬಗ್ಗೆ ಕೈಗೊಂಡಿರುವ ಪ್ರಗತಿ ಏನು ; (ವಿವರ ನೀಡುವುದು)

(ಆ) ಪಿಲಿಕುಳ ನಿಸರ್ಗಧಾಮವನ್ನು ಪ್ರಾಧಿಕಾರ ಮಾಡಬೇಕೆಂದು ಬಿಲ್‌ನ್ನು ಮಂಜೂರು ಮಾಡಲಾಗಿದ್ದು, ಈ ಬಗ್ಗೆ ನಿಯಮಗಳನ್ನು ರಚಿಸಲಾಗಿದೆಯೇ ; ಇಲ್ಲದಿದ್ದರೆ ಕಾರಣಗಳೇನು ;

(ಇ) ಪಿಲಿಕುಳ ನಿಸರ್ಗಧಾಮದಲ್ಲಿ ಪ್ರಸ್ತುತ ಇರುವ ತಿಂಗಳೊಂದಕ್ಕೆ ಆದಾಯ ಎಷ್ಟು ; ಖರ್ಚು ಎಷ್ಟು ; ಎಷ್ಟು ಮಂದಿ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಪಿಲಿಕುಳ ನಿಸರ್ಗಧಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ "ವಾಟರ್ ಪಾರ್ಕ್"ನಿಂದ ಬರುವ ಆದಾಯ ಎಷ್ಟು ; ಇದನ್ನು ಎಷ್ಟು ವರ್ಷಗಳ ಕಾಲ ಗುತ್ತಿಗೆ ನೀಡಲಾಗಿದೆ ; (ವಿವರ ನೀಡುವುದು)

(ಉ) ವಾಟರ್ ಪಾರ್ಕ್‌ನಿಂದ ಪಿಲಿಕುಳಕ್ಕೆ ಆದಾಯ ಬರುತ್ತಿಲ್ಲ ಎಂಬ ದೂರುಗಳಿದ್ದು, ಇದು ನಿಜವೇ ; ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)